# ಒತ್ತುವರಿ ತೆರವಿಗೆ ಕ್ರಮ

## ಬೆಂಗಳೂರಿನ ನೆರೆ ಪೀಡಿತ ಪ್ರದೇಶಗಳಿಗೆ ಸಿಎಂ ಭೇಟಿ

**ಬೆಂಗಳೂರು:** ರಾಜಧಾನಿಯಲ್ಲಿ ವರುಣ ಸೃಷ್ಟಿಸಿರುವ ಅವಾಂತರ ಹೇಳತೀರದು. ಶುಕ್ರವಾರ ಸುರಿದ ಭಾರೀ ಮಳೆ ಸೃಷ್ಟಿಸಿದ ಪ್ರವಾಹದಿಂದಾಗಿ ನಗರದ ದಕ್ಷಿಣ ಭಾಗದಲ್ಲಿ ನೂರಾರು ಕುಟುಂಬಗಳು ಸಂಕಷ್ಟಕ್ಕೀಡಾದ ಹಿನ್ನೆಲೆಯಲ್ಲಿ ಶನಿವಾರ ಸಿಎಂ ಬಿ.ಎಸ್.ಯಡಿಯೂರಪ್ಪ ಅವರೇ ನೆರೆ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ನೊಂದವರಿಗೆ ಸಾಂತ್ವನ ಹೇಳಿದರು.

ಕಾವೇರಿಯಲ್ಲಿ ಸಚಿವರು, ಅಧಿಕಾರಿಗಳ ಸಭೆ ನಡೆಸಿದ ಸಿಎಂ, ತಕ್ಷಣವೇ ನೆರೆ ಪೀಡಿತ ಪ್ರದೇಶಗಳ ಪರಿಶೀಲನೆಗಾಗಿ ಹೊರಟರು. ನೊಂದವರ ಕಷ್ಟ ಕೇಳಿದ ಅವರು. ತಕ್ಷಣದ ಪರಿಹಾರವಾಗಿ 25,000 ರೂ. ಬಿಡುಗಡೆಗೆ ಆದೇಶಿಸಿದರು. ರಾಜಕಾಲುವೆಗೆ ಶಾಶ್ವತ ತಡೆಗೋಡೆ ನಿರ್ಮಾಣಕ್ಕೆ ಕ್ರಮ ವಹಿಸುವಂತೆಯೂ ಅಧಿಕಾರಿಗಳಿಗೆ ಸೂಚನೆ ನೀಡಿದರು. ರಾಜಕಾಲುವೆ ಒತ್ತುವರಿಯನ್ನು ಮುಲಾಜಿಲ್ಲದೆ ತೆರವುಗೊಳಿಸಲು ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ಹಬ್ಬದ ಸಂದರ್ಭದಲ್ಲೇ ಸಮಸ್ಯೆ ಸಿಲುಕಿದ ಬಡ ಕುಟುಂಬಗಳಿಗೆ ಆಹಾರ ಕಿಟ್ ವಿತರಿಸಿದರು.



**ಸಿಎಂಗೆ ಮುತ್ತಿಗೆ ಯತ್ನ:** ಹೊಸಕೆರೆಹಳ್ಳಿಯಲ್ಲಿ ಹಾನಿಯಾದ ಪ್ರದೇಶದಲ್ಲಿ ಪರಿಶೀಲನೆ ನಡೆಸಲು ಆಗಮಿಸಿದ ಸಿಎಂ ಅವರ ಕಾರಿಗೆ ಸಂತ್ರಸ್ತ ನಿವಾಸಿಗಳು ಮುತ್ತಿಗೆ ಹಾಕಿದ ಘಟನೆ ನಡೆಯಿತು.

**ಕಾವೇರಿಯಲ್ಲಿ ಸಭೆ:** ಶುಕ್ರವಾರ ಸಂಜೆಯಿಂದ ರಾತ್ರಿ ಸುರಿದ ಮಳೆ ಹೊಸಕೆರೆಹಳ್ಳಿ ರಾಜಕಾಲುವೆ ಉಕ್ಕಿ ಹರಿದು ಸಾಕಷ್ಟು ಅವಾಂತರ ಸೃಷ್ಟಿಯಾಗಿತ್ತು. ಹಾಗೆಯೇ ಸುತ್ತಮುತ್ತಲ ಸಾಕಷ್ಟು ಪ್ರದೇಶಗಳು ಜಲಾವೃತವಾಗಿ ಜನ ಸಂಕಷ್ಟಕ್ಕೆ ಸಿಲುಕಿದ್ದರು. ಪರಿಸ್ಥಿತಿಯ ತೀವ್ರತೆ ಅರಿತ ಯಡಿಯೂರಪ್ಪ ಅವರು ಶನಿವಾರ 'ಕಾವೇರಿ'ಯಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ದಿಢೀರ್ ಸಭೆ ನಡೆಸಿದರು.